ಕರ್ನಾಟಕ ವಿಧಾನ ಪರಿಷತ್

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	1234
ಸದಸ್ಯರ ಹೆಸರು	:	ಶ್ರೀ ಎಸ್.ನಾಗರಾಜ್ (ಸಂದೇಶ್ ನಾಗರಾಜು) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ	:	17-03-2021
ಉತ್ತರಿಸುವ ಸಚಿವರು	:	ಮಾನ್ಯ ಕಂದಾಯ ಸಚಿವರು

ಪ್ರಶ್ನೆ	ಉತ್ತರ
(ಅ) ಚಾಮರಾಜನಗರ ಜಿಲ್ಲೆಯ ಅನೇಕ ಕಡೆ ಈಚೆಗೆ ಅಕಾಲಿಕವಾಗಿ ಭಾರೀ ಮಳೆಯಿಂದಾಗಿ ಬೆಳೆ ಹಾನಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;	ಬಂದಿದೆ.
(ಆ) ಈ ರೀತಿಯ ಪ್ರಕೃತಿ ವಿಕೋಪದಿಂದ ಉಂಟಾಗಿರುವ ಬೆಳೆ ಹಾನಿ ಬಗ್ಗೆ ಅಂದಾಜು ಮಾಡಲಾಗಿದೆಯೇ; ಎಷ್ಟು ಎಕರೆ ಪ್ರದೇಶದಲ್ಲಿ ಎಷ್ಟು ಬೆಳೆ ಹಾನಿ ಆಗಿದೆ; ಈ ಬಗ್ಗೆ ಬೆಳೆ ಹಾನಿ ಪರಿಹಾರಕ್ಕೆ ರೈತರು ಅರ್ಜಿ ಸಲ್ಲಿಸಿರುವ ವಿವರ ಒದಗಿಸುವುದು;	ಚಾಮರಾಜನಗರ ಜಿಲ್ಲೆಯ ಅನೇಕ ಕಡೆ ಈಚೆಗೆ ಅಕಾಲಿಕವಾಗಿ ಭಾರೀ ಮಳೆಯಿಂದಾಗಿ ಪ್ರಕೃತಿ ವಿಕೋಪ ಉಂಟಾಗಿ ಬೆಳೆ ಹಾನಿಯಾದ ವಿವರ ಈ ಕೆಳಗಿನಂತಿದೆ. (see table below)

ಕ್ರ. ಸಂ	ತಾಲ್ಲೂಕು	ಹಾನಿಯಾಗಿರುವ ಪ್ರದೇಶ ವಿಸ್ತೀರ್ಣ (ಹೆಕ್ಟೇರ್‌ಗಳಲ್ಲಿ)
1	ಚಾಮರಾಜನಗರ	60.78
2	ಗುಂಡ್ಲುಪೇಟೆ	2.47
3	ಯಳಂದೂರು	0
4	ಕೊಳ್ಳೇಗಾಲ	21.96
5	ಹನೂರು	30.16
	ಒಟ್ಟು	115.37

ತೋಟಗಾರಿಕೆ, ಕೃಷಿ ಮತ್ತು ಕಂದಾಯ ಇಲಾಖೆಯ ಅಧಿಕಾರಿಗಳ ಮೂಲಕ ಪ್ರಕೃತಿ ವಿಕೋಪದಿಂದ ಉಂಟಾಗಿರುವ ಹಾನಿ ಬಗ್ಗೆ ಅಂದಾಜು ಮಾಡಲಾಗಿದೆ.

ಬೆಳೆ ಹಾನಿ ಪರಿಹಾರ ಕೋರಿ 343 ಅರ್ಜಿಗಳು ಸ್ವೀಕೃತವಾಗಿರುತ್ತದೆ.

ಪ್ರಶ್ನೆ	ಉತ್ತರ
(ಇ) ರೈತರಿಗೆ ಬೆಳೆ ಹಾನಿ ಪರಿಹಾರ ನೀಡುವ ಕುರಿತು ಸರ್ಕಾರದ ಕ್ರಮವೇನು?	ಅತಿವೃಷ್ಟಿ/ನೆರೆಹಾವಳಿಯಿಂದ ಶೇ.33ಕ್ಕಿಂತ ಹೆಚ್ಚಿನ ಬೆಳೆ ಹಾನಿಗೆ ತುತ್ತಾದ ಕೃಷಿಕರಿಗೆ ಕೇಂದ್ರ ಸರ್ಕಾರದ ಎನ್.ಡಿ.ಆರ್.ಎಫ್/ಎಸ್.ಡಿ.ಆರ್.ಎಫ್ ಮಾರ್ಗ ಸೂಚಿಗಳ ಪ್ರಕಾರ ಗರಿಷ್ಟ 2 ಹೆಕ್ಟೇರ್‌ಗೆ ಸೀಮಿತಗೊಳಿಸಿ ಈ ಕೆಳಕಂಡ ದರದಲ್ಲಿ ಇನ್‌ಪುಟ್ ಸಬ್ಸಿಡಿಯನ್ನು ನೀಡಲಾಗುತ್ತದೆ. • ಮಳೆಯಾಶ್ರಿತ ಬೆಳೆಹಾನಿ-ಪ್ರತಿ ಹೆಕ್ಟೇರ್‌ಗೆ ರೂ.6800/- • ನೀರಾವರಿ ಬೆಳೆಹಾನಿ- ಪ್ರತಿ ಹೆಕ್ಟೇರ್‌ಗೆ ರೂ.13500/- • ಬಹುವಾರ್ಷಿಕ ಬೆಳೆಹಾನಿ-ಪ್ರತಿ ಹೆಕ್ಟೇರ್‌ಗೆ ರೂ.18000/-

ಕಂಇ 111 ಟಿಎನ್‌ಆರ್ 2021

(ಆರ್. ಅಶೋಕ)
ಕಂದಾಯ ಸಚಿವರು